ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ
KARNATAK UNIVERSITY DHARWAD
ಪರೀಕ್ಷಾ ವಿಭಾಗ
ಗೌಪ್ಯ ಶಾಖೆ, 2ನೇ ಮಹಡಿ, ಪರೀಕ್ಷಾ ಭವನ
EXAMINATION SECTION
Confidential Branch, 2nd Floor, Examination Bhavan

Azadi Ka Amrit Mahotsav

Website: www.kud.ac.in
e-mail: confidential@kud.ac.in
☎: (0836) 2215259

ನಂ.ಕವಿವಿ/ಪರೀಕ್ಷಾ-ಗೌಪ್ಯ/2023/ 13 ದಿನಾಂಕ :18.04.2023

**ಸುತ್ತೋಲೆ**

**ವಿಷಯ:** UUCMS ತಂತ್ರಾಂಶದಲ್ಲಿ ಎಲ್ಲ ಪ್ರಾಧ್ಯಾಪಕರಿಗೆ User ID ಯನ್ನು ಕಡ್ಡಾಯವಾಗಿ ಪೂರೈಸುವ ಕುರಿತು.

**ಉಲ್ಲೇಖ:** ನಂ.ಕವಿವಿ/ಪರೀಕ್ಷಾ-ಗೌಪ್ಯ/2023 ದಿನಾಂಕ: 30.01.2023

-@-

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಘಟಕ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, ರಾಷ್ಟ್ರೀಯ ಶಿಕ್ಷಣ ನೀತಿ-2020 (NEP) ರ ಅಡಿಯಲ್ಲಿ ಜಾರಿಯಲ್ಲಿರುವ ಎಲ್ಲ ಸ್ನಾತಕ ಪದವಿಗಳ 1ನೇ ಮತ್ತು 3ನೇ ಸೆಮೆಸ್ಟರ್ ಪ್ರಾಯೋಗಿಕ ಪರೀಕ್ಷೆಯ ಪ್ರಕ್ರಿಯೆ ಈಗಾಗಲೇ ಪ್ರಾರಂಭಗೊಂಡಿದ್ದು UUCMS ತಂತ್ರಾಂಶದಲ್ಲಿ ತಮ್ಮ ಮಹಾವಿದ್ಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲ ಖಾಯಂ ಹಾಗೂ ಅತಿಥಿ ಉಪನ್ಯಾಸಕರಿಗೆ UUCMS User ID ನೀಡುವುದು ಕಡ್ಡಾಯವಾಗಿರುತ್ತದೆ. ಆದರೆ ಕೆಲವೊಂದು ಮಹಾವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಿಗೆ ಇಲ್ಲಿಯವರೆಗೂ UUCMS User ID ಪೂರೈಸದಿರುವುದು ಮೇಲಾಧಿಕಾರಿಗಳ ಗಮನಕ್ಕೆ ಬಂದಿರುತ್ತದೆ. ಪ್ರಸ್ತುತವಾಗಿ ಪ್ರಾಯೋಗಿಕ ಪರೀಕ್ಷೆಯನ್ನು ಜರುಗಿಸುವ ಕುರಿತಂತೆ ಕಾರ್ಯವು ಪ್ರಗತಿಯಲ್ಲಿರುವುದರಿಂದ ತುರ್ತಾಗಿ UUCMS ದ ತಂತ್ರಾಂಶದಲ್ಲಿ ಎಲ್ಲ ಪ್ರಾಧ್ಯಾಪಕರಿಗೆ User ID ಯನ್ನು ಪೂರೈಸುವುದು ಕಡ್ಡಾಯವಿರುತ್ತದೆ.

ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ತಮ್ಮ ಮಹಾವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲ ಖಾಯಂ ಹಾಗೂ ಅತಿಥಿ ಉಪನ್ಯಾಸಕರಿಗೆ ದಿನಾಂಕ: **20.04.2023**ರೊಳಗಾಗಿ UUCMS User ID ನೀಡಲು ಈ ಮೂಲಕ ತಿಳಿಸಲಾಗಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಮಹಾವಿದ್ಯಾಲಯದ ಪ್ರಾಚಾರ್ಯರುಗಳೇ ಹೊಣೆಗಾರರಾಗುತ್ತಾರೆ. ಹಾಗೂ ಅಂತಹ ಮಹಾವಿದ್ಯಾಲಯದ ಫಲಿತಾಂಶ ತಡೆಹಿಡಿಯಲಾಗುವುದು. ಮುಂದುವರೆದು, ಕೆಲ ಪ್ರಾಧ್ಯಾಪಕರು ಬೇರೆ ಮಹಾವಿದ್ಯಾಲಯಕ್ಕೆ ವರ್ಗಾವಣೆಯಾದಲ್ಲಿ ಗೌಪ್ಯವಿಭಾಗಕ್ಕೆ ಮಾಹಿತಿ ನೀಡುವುದು.

18/4/23

ಕುಲಸಚಿವರು (ಮೌಲ್ಯಮಾಪನ)

**ಗೆ,**

ಪ್ರಾಚಾರ್ಯರು, ಕರ್ನಾಟಕ ವಿಶ್ವವಿದ್ಯಾಲಯದ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳು

ಪ್ರತಿ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ :

1. ಡಾ. ಶಿವಶಂಕರ ಎಸ್. ನಿರ್ದೇಶಕರು, ಯುಯುಸಿಎಂಎಸ್ ಘಟಕ, ಕ.ವಿ.ವಿ., ಧಾರವಾಡ
2. ಸಿಸ್ಟಮ್ ಅನಾಲಿಸ್ಟ, ಗಣಕಯಂತ್ರ ಕೇಂದ್ರ, ಪರೀಕ್ಷಾ ವಿಭಾಗ, ಕ.ವಿ.ವಿ.ಧಾರವಾಡ.
3. ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕನಾಟಕ ವಿಶ್ವವಿದ್ಯಾಲಯ, ಧಾರವಾಡ.
4. ಕುಲಪತಿಗಳು/ ಕುಲಸಚಿವರು/ ಕುಲಸಚಿವರು (ಮೌಲ್ಯಮಾಪನ) ಇವರ ಆಪ್ತಕಾರ್ಯದರ್ಶಿಗಳು, ಕ.ವಿ.ವಿ., ಧಾರವಾಡ.
5. ನಿರ್ದೇಶಕರು ಅಂತರ್ಜಾಲ ವಿಭಾಗ, ಕ.ವಿ.ವಿ., ಧಾರವಾಡ ಇವರಿಗೆ ಮುಂದುವರೆದು ಸದರ ಸುತ್ತೋಲೆಯನ್ನು ಕ.ವಿ.ವಿ., ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.